# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಪ್ರಶ್ನೆ ಸಂಖ್ಯೆ | 1744 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎ. ವಸಂತ ಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23-03-2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ವೈದ್ಯರು ಮತ್ತು ತಜ್ಞರ (specialists) ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ಅವುಗಳನ್ನು ಭರ್ತಿ ಮಾಡುವ ಕ್ರಮ ಯಾವ ಹಂತದಲ್ಲಿದೆ:</td><td>ರಾಯಚೂರು ಜಿಲ್ಲೆಯಲ್ಲಿರುವ ಸರ್ಕಾರಿ ವೈದ್ಯರು ಮತ್ತು ತಜ್ಞರ ಹುದ್ದೆಗಳ ವಿವರ ಕೆಳಕಂಡಂತಿದೆ.
<table>
<tr><th colspan="3">ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು</th></tr>
<tr><td>ಮಂಜೂರು</td><td>ಕಾರ್ಯನಿರತ</td><td>ಖಾಲಿ</td></tr>
<tr><td>80</td><td>32</td><td>48</td></tr>
<tr><th colspan="3">ತಜ್ಞ ವೈದ್ಯರು (specialists)</th></tr>
<tr><td>80</td><td>36</td><td>44</td></tr>
</table>
ಖಾಲಿ ಇರುವ ವೈದ್ಯಾಧಿಕಾರಿಗಳು ಮತ್ತು ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲಾಗಿರುತ್ತದೆ. ಮುಂದುವರೆದು MBBS ಮತ್ತು ಉನ್ನತ ವ್ಯಾಸಂಗ ಮುಗಿಸಿರುವ ತಜ್ಞ ವೈದ್ಯಾಧಿಕಾರಿಗಳನ್ನು ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿ ಖಾಲಿ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿರುತ್ತದೆ.</td></tr>
<tr><td>ಆ)</td><td>ರಾಯಚೂರು ಜಿಲ್ಲಾಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿನ ICU, Dialysis, CT Scan ಸೌಲಭ್ಯಗಳ ಸ್ಥಿತಿ ಏನು;</td><td>ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದಡಿ ರಾಯಚೂರು ಜಿಲ್ಲೆಯ ಜಿಲ್ಲಾ ಆಸ್ಪತ್ರೆ (ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಒಪೆಕ್) ತಾಲ್ಲೂಕು ಆಸ್ಪತ್ರೆಗಳು ಹಾಗೂ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ಒಳಗೊಂಡಂತೆ ಒಟ್ಟು 06 ಡಯಾಲಿಸಿಸ್ ಕೇಂದ್ರಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ.<br><br><u>ರಾಯಚೂರು ಜಿಲ್ಲೆಯ ಡಯಾಲಿಸಿಸ್ ಕೇಂದ್ರಗಳು:-</u><br><br>1. ಜಿಲ್ಲಾ ಆಸ್ಪತ್ರೆ (ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಒಪೆಕ್),<br>2. ಲಿಂಗಸೂಗೂರು,<br>3. ದೇವದುರ್ಗ<br>4. ಸಿಂಧನೂರು<br>5. ಮಾನವಿ</td></tr>
</table>

| | | |
|---|---|---|
| | | 6. ತುರುವಿಹಾಳ್<br><br>ಸದರಿ ಕೇಂದ್ರಗಳಲ್ಲಿ ಒಟ್ಟು 35 ಡಯಾಲಿಸಿಸ್ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ, ಪ್ರಸ್ತುತ ಈ ಎಲ್ಲಾ ಕೇಂದ್ರಗಳಲ್ಲಿ ಒಟ್ಟು 187 ಡಯಾಲಿಸಿಸ್ ರೋಗಿಗಳು ಡಯಾಲಿಸಿಸ್ ಚಿಕಿತ್ಸೆಯನ್ನು ಪಡೆಯುತ್ತಿದ್ದಾರೆ, ಪ್ರತಿ ಮಾಹೆ ಒಟ್ಟು 1652 ಡಯಾಲಿಸಿಸ್ ಸೈಕಲ್‌ಗಳನ್ನು 3 ಪಾಳಿಯಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ.<br><br>ರಾಯಚೂರು ಜಿಲ್ಲೆಯಲ್ಲಿ ಜಿಲ್ಲಾ ಆಸ್ಪತ್ರೆ ಇರುವುದಿಲ್ಲ ಹಾಗೂ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ICU ಮತ್ತು Dialysis ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಮತ್ತು ವಿಭಾಗೀಯ ಮಟ್ಟದ ಆಸ್ಪತ್ರೆಯಾದ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಲಿಂಗಸೂಗೂರಿನಲ್ಲಿ CT Scan ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. |
| ಇ) | ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ (PHC) ಸಂಖ್ಯೆ ಎಷ್ಟು; 24X7 ಕಾರ್ಯನಿರ್ವಹಿಸುವ PHC ಎಷ್ಟು? | ಜಿಲ್ಲೆಯಲ್ಲಿ ಒಟ್ಟು 46 ಪ್ರಾಥಮಿಕ ಆರೋಗ್ಯ ಕೇಂದ್ರಗಳಿದ್ದು 24×7 ಮಾದರಿಯಲ್ಲಿ 42 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕರ್ತವ್ಯ ನಿರ್ವಹಿಸುತ್ತಿವೆ. |

**HFW/19/HSD/2026**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು